# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಅಲ್ಪಸಂಖ್ಯಾತ ವಿದ್ಯಾರ್ಥಿನಿಲಯ, ವಸತಿ ಶಾಲೆ/ಕಾಲೇಜು ಮತ್ತು ಮೌಲಾನಾ ಅಜಾದ್ ಮಾದರಿ ಶಾಲೆಗಳ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಹಾಗೂ ಅತ್ಯುತ್ತಮ ಫಲಿತಾಂಶ ಗಳಿಸಿದ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನೀಡುವ ಕುರಿತು.

**ಓದಲಾಗಿದೆ:** 1. 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ **212**.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ: ಅಸಂನಿ/ವಿನಿ/ವಶಾ/ಪ್ರ.ಪು/ಸಿಆರ್-14/2018-19,ದಿನಾಂಕ:02-04-2018

*~*~*~*~*~*

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2018-19ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ **ಕಂಡಿಕೆ-212 ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಮಾದರಿಯಲ್ಲಿ ಅಲ್ಪಸಂಖ್ಯಾತ ವಿದ್ಯಾರ್ಥಿನಿಲಯ/ವಸತಿ ಶಾಲೆಗಳಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಹಾಗೂ ಅತ್ಯುತ್ತಮ ಫಲಿತಾಂಶ ಗಳಿಸಿದ ವಸತಿ ಶಾಲೆ/ಕಾಲೇಜುಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದು ಘೋಷಿಸಿರುತ್ತಾರೆ**.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ /ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಲ್ಲಿ ಅತೀ ಹೆಚ್ಚು ಅಂಕಗಳಿಸಿದ ನಿಲಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡುವ ಕಾರ್ಯಕ್ರಮ ಈಗಾಗಲೇ ಜಾರಿಯಲ್ಲಿದೆ. ಅದರಂತೆ, ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯ, ಮೊರಾರ್ಜಿದೇಸಾಯಿ ವಸತಿ ಶಾಲೆ/ಕಾಲೇಜು, ಸರ್ಕಾರಿ ಮುಸ್ಲಿಂ ವಸತಿ ಶಾಲೆ, ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ ಹಾಗೂ ಮೌಲಾನಾ ಅಜಾದ್ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ, 2ನೇ ಪಿಯುಸಿ, ಅಂತಿಮ ವರ್ಷದ ಟಿ.ಸಿ.ಹೆಚ್/ಡಿಪ್ಲೋಮ, ಅಂತಿಮ ವರ್ಷದ ಪದವಿ, ಅಂತಿಮ ವರ್ಷದ ಸ್ನಾತಕೋತ್ತರ ಪದವಿಗಳಲ್ಲಿ ಮೊದಲ ಪ್ರಯತ್ನದಲ್ಲೇ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದಲ್ಲಿ ಅವರ ಶಿಕ್ಷಣ ಮುಂದುವರೆಸಲು ಹಾಗೂ ಶೈಕ್ಷಣಿಕ ಉತ್ತೇಜನ ನೀಡುವ ಸಲುವಾಗಿ ಮೊದಲ ಪ್ರಯತ್ನದಲ್ಲೇ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರುವ ಎಸ್.ಎಸ್.ಎಲ್.ಸಿ, 2ನೇ ಪಿಯುಸಿ, ಅಂತಿಮ ವರ್ಷದ ಟಿ.ಸಿ.ಹೆಚ್/ಡಿಪ್ಲೋಮ, ಅಂತಿಮ ವರ್ಷದ ಪದವಿ, ಅಂತಿಮ ವರ್ಷದ ಸ್ನಾತಕೋತ್ತರ ಪದವಿಗಳಲ್ಲಿ ವಿದ್ಯಾರ್ಥಿನಿಲಯ ಹಾಗೂ ವಸತಿ ಶಾಲಾ/ಕಾಲೇಜುಗಳಲ್ಲಿನ ವಿದ್ಯಾರ್ಥಿಗಳಿಗೆ ಅನುಕ್ರಮವಾಗಿ 1000, 1500, 2000 ಮತ್ತು 3000 ಪ್ರೋತ್ಸಾಹಧನ ಹಾಗೂ ಮೊದಲ ಪ್ರಯತ್ನದಲ್ಲೇ ಶೇಕಡ 100% ಫಲಿತಾಂಶ ಗಳಿಸಿದ ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜು, ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ತಲಾ ರೂ. 10,000/-ರಂತೆ ಪ್ರತಿಭಾ ಪುರಸ್ಕಾರ ನೀಡಲು ಮಂಜೂರು ಮಾಡಿ ಆದೇಶ ಹೊರಡಿಸಲು ಕೋರಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ರವರು ಏಕಕಡತ ಪದ್ಧತಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

...2